# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 1579 |
| ಸದಸ್ಯರ ಹೆಸರು | ಶ್ರೀ ಡಿ.ಎಸ್. ಅರುಣ್<br>(ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು) |
| ಉತ್ತರಿಸುವ ದಿನಾಂಕ | 21-03-2025 |
| ಉತ್ತರಿಸುವ ಸಚಿವರು | ಕೃಷಿ ಸಚಿವರು |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ಮಿಲ್ಲೆಟ್ ಮಿಷನ್ ಯೋಜನೆಯಡಿಯಲ್ಲಿ ಕೇಂದ್ರದಿಂದ ಎಷ್ಟು ಹಣ ಬಂದಿದೆ; | ಕೃಷಿ ಇಲಾಖೆಯಲ್ಲಿ ಮಿಲ್ಲೆಟ್ ಮಿಷನ್ ಎಂಬ ಯೋಜನೆಯು ಅನುಷ್ಠಾನದಲ್ಲಿ ಇರುವುದಿಲ್ಲ. ಆದರೆ, ಸಿರಿಧಾನ್ಯ ಬೆಳೆಗಳ ಉತ್ಪಾದನೆಯನ್ನು ಉತ್ತೇಜಿಸಲು ಆಹಾರ ಮತ್ತು ಪೌಷ್ಠಿಕ ಭದ್ರತೆ – ನ್ಯೂಟ್ರಿ ಸಿರಿಧಾನ್ಯಗಳು ಕಾರ್ಯಕ್ರಮವು ಅನುಷ್ಠಾನದಲ್ಲಿದ್ದು, 2024-25 ನೇ ಸಾಲಿನಲ್ಲಿ ಕೇಂದ್ರದಿಂದ ರೂ.8336.24 ಲಕ್ಷಗಳ ಅನುದಾನ ಬಿಡುಗಡೆಯಾಗಿರುತ್ತದೆ. ಹಾಗೆಯೇ, ರಾಷ್ಟ್ರೀಯ ಕೃಷಿ ವಿಕಾಸ ಯೋಜನೆ – ರೈತಸಿರಿ ಕಾರ್ಯಕ್ರಮವು ಅನುಷ್ಠಾನದಲ್ಲಿದ್ದು, 2024-25 ನೇ ಸಾಲಿನಲ್ಲಿ ಕೇಂದ್ರದಿಂದ ರೂ.6.00 ಕೋಟಿಗಳ ಅನುದಾನ ಬಿಡುಗಡೆಯಾಗಿರುತ್ತದೆ. |
| ಆ) | ರಾಜ್ಯದ ಎಲ್ಲಾ ಜಿಲ್ಲೆಗಳಲ್ಲೂ ಸಿರಿಧಾನ್ಯ ಬೆಳೆಗೆ ರೈತರಿಗೆ ಪ್ರೋತ್ಸಾಹ ಧನ ನೀಡಲಾಗಿದೆಯೇ; | **1.** ಆಹಾರ ಮತ್ತು ಪೌಷ್ಠಿಕ ಭದ್ರತೆ – ನ್ಯೂಟ್ರಿ ಸಿರಿಧಾನ್ಯಗಳು ಯೋಜನೆಯನ್ನು ರಾಜ್ಯದ 26 ಜಿಲ್ಲೆಗಳಲ್ಲಿ (ಕೊಡಗು, ದಕ್ಷಿಣ ಕನ್ನಡ, ಶಿವಮೊಗ್ಗ, ಉತ್ತರ ಕನ್ನಡ ಮತ್ತು ಉಡುಪಿ ಜಿಲ್ಲೆಗಳನ್ನು ಹೊರತು ಪಡಿಸಿ) ಅನುಷ್ಠಾನಗೊಳಿಸಲಾಗುತ್ತಿದ್ದು, ಸಿರಿಧಾನ್ಯ ಬೆಳೆಗಳ ಉತ್ಪಾದನೆಯನ್ನು ಈ ಕೆಳಗಿನ ಘಟಕಗಳನ್ನು ಅನುಷ್ಠಾನ ಮಾಡಿ ಉತ್ತೇಜಿಸಲಾಗುತ್ತಿದೆ.<br>**ಅ)** ಗುಚ್ಛ ಪ್ರಾತ್ಯಕ್ಷಿಕೆಗಳು: ಆಧುನಿಕ ತಾಂತ್ರಿಕತೆಗಳ ಗುಚ್ಛ ಪ್ರಾತ್ಯಕ್ಷಿಕೆಗಳನ್ನು ಅಳವಡಿಸಿಕೊಳ್ಳುವ ರೈತರಿಗೆ ಪ್ರತಿ ಹೆಕ್ಟೇರಿಗೆ ರೂ.6000 ಪ್ರೋತ್ಸಾಹ ಧನ ಒದಗಿಸಲಾಗುತ್ತಿದೆ. ಅದರಲ್ಲಿ,<br>• ನೇರ ನಗದು ವರ್ಗಾವಣೆ ರೂಪದಲ್ಲಿ ರೂ. 1500/ಹೆ.<br>• ಪ್ರಾತ್ಯಕ್ಷಿಕೆ ಕಿಟ್ ಪರಿಕರಗಳಿಗೆ ರೂ. 3700/ಹೆ. ಹಾಗೂ<br>• ಕ್ಷೇತ್ರೋತ್ಸವ, ವಿಜ್ಞಾನಿಗಳ ಭೇಟಿ ಮತ್ತು ಪ್ರಚಾರ ವೆಚ್ಚ ಭರಿಸಲು ರೂ. 800/ಹೆ. |

| | | |
|---|---|---|
| | | **ಆ)** ಸಿರಿಧಾನ್ಯ ಬೆಳೆಗಳ ಉತ್ಪಾದನೆಗೆ ಬಿತ್ತನೆ ಬೀಜ, ಸಮಗ್ರ ಪೋಷಕಾಂಶ ನಿರ್ವಹಣೆ, ಸಮಗ್ರ ಪೀಡೆ ನಿರ್ವಹಣೆ, ನೀರಾವರಿ ಸಾಧನಗಳು ಹಾಗೂ ಕೃಷಿ ಉಪಕರಣಗಳಿಗೆ ಶೇ.50 ರಷ್ಟು ಸಹಾಯಧನವನ್ನು ನೀಡಲಾಗುತ್ತಿದೆ.<br><br>**ಇ)** ಸಿರಿಧಾನ್ಯ ಬೆಳೆಗಳ ದೃಢೀಕೃತ ಬಿತ್ತನೆ ಬೀಜಗಳ ಉತ್ಪಾದನೆಯನ್ನು ಪ್ರೋತ್ಸಾಹಿಸಲು ಪ್ರತಿ ಹೆಕ್ಟರಿಗೆ ರೂ.3000/- ಪ್ರೋತ್ಸಾಹ ಧನ ಒದಗಿಸಲಾಗುತ್ತಿದೆ.<br><br>**2.** ರೈತಸಿರಿ ಯೋಜನೆಯಡಿ ಬೆಳೆ ಸಮೀಕ್ಷೆ ಆಧಾರದ ಮೇಲೆ ಸಿರಿಧಾನ್ಯಗಳಾದ ನವಣೆ, ಹಾರಕ, ಕೊರಲೆ, ಸಾಮೆ, ಊದಲು, ಬರಗು ಬೆಳೆಗಳನ್ನು ಬೆಳೆದ ಜಿಲ್ಲೆಗಳ ಎಲ್ಲಾ ರೈತರಿಗೆ ಪ್ರತಿ ಹೆಕ್ಟೇರಿಗೆ ರೂ.10000/-ದಂತೆ ಗರಿಷ್ಠ ಎರಡು ಹೆಕ್ಟೇರುಗಳಿಗೆ ಪ್ರೋತ್ಸಾಹ ಧನವನ್ನು ನೇರ ನಗದು ವರ್ಗಾವಣೆ ಮೂಲಕ ಪಾವತಿಸಲಾಗುತ್ತಿದೆ. |
| ಇ) | ಮಿಲ್ಲೆಟ್ ಮಿಷನ್ ಯೋಜನೆಯ ಅಡಿಯಲ್ಲಿ ಶಿವಮೊಗ್ಗ ಜಿಲ್ಲೆಗೆ ಎಷ್ಟು ಹಣವನ್ನು ಬಿಡುಗಡೆ ಮಾಡಲಾಗಿದೆ; | 2024-25 ನೇ ಸಾಲಿನಲ್ಲಿ ಶಿವಮೊಗ್ಗ ಜಿಲ್ಲೆಗೆ ಆಹಾರ ಮತ್ತು ಪೌಷ್ಠಿಕ ಭದ್ರತೆ – ನ್ಯೂಟ್ರಿ ಸಿರಿಧಾನ್ಯಗಳು ಯೋಜನೆಯ ಕಾರ್ಯಕ್ರಮ ಇರುವುದಿಲ್ಲ. |
| ಈ) | ರಾಜ್ಯದಲ್ಲಿ ಶಾಲಾ ಮಕ್ಕಳಿಗೆ ಸಿರಿಧಾನ್ಯದ ಮಧ್ಯಾಹ್ನದ ಊಟ ನೀಡುವ ಯೋಜನೆ ಇದೆಯೇ; | ರಾಜ್ಯದಲ್ಲಿ ಶಾಲಾ ಮುಕ್ಕಳಿಗೆ ಸಿರಿಧಾನ್ಯದ ಮಧ್ಯಾಹ್ನದ ಬಿಸಿಯೂಟ ನೀಡುವ ಯೋಜನೆ ಜಾರಿಯಲ್ಲಿ ಇರುವುದಿಲ್ಲ. ಆದರೆ ಕ್ಷೀರಭಾಗ್ಯ ಯೋಜನೆಯಡಿ ವಾರದಲ್ಲಿ ಮೂರು ದಿನ ನೀಡಲಾಗುವ ಬಿಸಿಹಾಲಿನೊಂದಿಗೆ ಸಾಯಿ ಸ್ಯೂರ್ ರಾಗಿ ಹೆಲ್ತ್ ಮಿಕ್ಸ್ ಪುಡಿಯನ್ನು ಮಿಶ್ರಣ ಮಾಡಿ ವಿದ್ಯಾರ್ಥಿಗಳಿಗೆ ನೀಡಲಾಗುತ್ತಿದೆ. |
| ಉ) | ಮಿಲ್ಲೆಟ್ ಮಿಷನ್ ಯೋಜನೆಯಡಿಯಲ್ಲಿ ರಾಜ್ಯ ಇದುವರೆಗೂ ಸಾಧಿಸಿರುವ ಪ್ರಗತಿಯೇನು? (ವರದಿ ನೀಡುವುದು) | ರಾಜ್ಯದಲ್ಲಿ ಮಿಲ್ಲೆಟ್ ಮಿಷನ್ ಎಂಬ ಯೋಜನೆಯು ಅನುಷ್ಠಾನದಲ್ಲಿ ಇರುವುದಿಲ್ಲ ಆದರೆ, 2024-25 ನೇ ಸಾಲಿನಲ್ಲಿ ಆಹಾರ ಮತ್ತು ಪೌಷ್ಠಿಕ ಭದ್ರತೆ – ನ್ಯೂಟ್ರಿ ಸಿರಿಧಾನ್ಯಗಳು ಯೋಜನೆಯಡಿ ರೂ.15255.204 ಲಕ್ಷಗಳು ಬಿಡುಗಡೆಯಾಗಿದ್ದು, ಇಲ್ಲಿಯವರೆಗೆ, ರೂ.6085.265 ಲಕ್ಷಗಳು ಸಾಧನೆಯಾಗಿರುತ್ತದೆ. ಯೋಜನೆಯ ಅನುಷ್ಠಾನ ಪ್ರಗತಿಯಲ್ಲಿದೆ. |

ಸಂಖ್ಯೆ: AGRI/98/ACT/2025

**(ಎನ್. ಚಲುವರಾಯಸ್ವಾಮಿ)**
ಕೃಷಿ ಸಚಿವರು